ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಸವದತ್ತಿ ಯಲ್ಲಮ್ಮ ದೇವಸ್ಥಾನದ ಮೂಲಭೂತ ಸೌಕರ್ಯದ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1142 (1405) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯ ಪ್ರಸಿದ್ದ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನಕ್ಕೆ ಪ್ರತಿದಿನ ಲಕ್ಷಾಂತರ ಭಕ್ತರು ಆಗಮಿಸುತ್ತಿದ್ದು, ಯಾತ್ರಾರ್ಥಿಗಳಿಗೆ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರ ಗಮನಕ್ಕೆ ಬಂದಿದೆಯೇ ;

(ಆ) ಗಮನಿಸಿದ್ದಲ್ಲಿ ಅದರ ಪರಿಹಾರಕ್ಕಾಗಿ ಇಲ್ಲಿಯವರೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ದೇವಸ್ಥಾನದಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಈ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಸದರಿ ದೇವಸ್ಥಾನದ ಅಭಿವೃದ್ಧಿಗಾಗಿ ಮಾಡಲಾದ ಖರ್ಚಿನ ವರ್ಗಾವಾರು ವಿವರ ನೀಡುವುದು ;

(ಉ) ಸದರಿ ದೇವಸ್ಥಾನಕ್ಕೆ ಬರುವ ಯಾತ್ರಿಕರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದ್ದು, ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಶೌಚಾಲಯ, ವಸತಿ ಹಾಗೂ ವಾಹನ ನಿಲುಗಡೆ ಸೌಲಭ್ಯಗಳ ಅವಶ್ಯಕತೆಗಳ ಸುಧಾರಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)